ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 23/07/2019

## ರೆಬೆಲ್ ಶಾಸಕರಿಗೆ ನೋಟಿಸ್
## ಮಂಗಳವಾರ ಹಾಜರಿಗೆ ಸೂಚನೆ

ಬೆಂಗಳೂರು: ಪಕ್ಷಾಂತರ ನಿಷೇಧ ಕಾಯಿದ ಅನ್ವಯ ಅನರ್ಹಗೊಳಿಸುವಂತೆ ಕಾಂಗ್ರೆಸ್ ನೀಡಿರುವ ದೂರಿನ ಹಿನ್ನೆಲೆಯಲ್ಲಿ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿರುವ 15 ಮಂದಿ ಜೆಡಿಎಸ್-ಕಾಂಗ್ರೆಸ್ ಸದಸ್ಯರಿಗೆ ಮಂಗಳವಾರ ಬೆಳಗ್ಗೆ 11 ಗಂಟೆಗೆ ವಿಚಾರಣೆಗೆ ಹಾಜರಾಗುವಂತೆ ವಿಧಾನಸಭೆ ಕಾರ್ಯದರ್ಶಿ ನೋಟಿಸ್ ಜಾರಿಗೊಳಿಸಿದ್ದಾರೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಅವರು ಸ್ಪೀಕರ್ ಕೆ.ಆರ್.ರಮೇಶ್‌ಕುಮಾರ್‌ಗೆ ಸಲ್ಲಿಸಿದ ದೂರಿನಲ್ಲಿ ಸಂವಿಧಾನದ ಷೆಡ್ಯೂಲ್ 10 ರಡಿ ಅನರ್ಹಗೊಳಿಸಬೇಕೆಂದು ಕೋರಿದ್ದರು. ಈ ಹಿನ್ನೆಲೆಯಲ್ಲಿ ಕರ್ನಾಟಕ ವಿಧಾನಸಭಾ ನಿಯಮಾವಳಿ 7 ಅನ್ವಯದಂತೆ ಶಾಸಕರಿಗೆ ನೋಟಿಸ್ ಜಾರಿ ಮಾಡಲಾಗಿದೆ. ಈ ನೋಟಿಸ್ ತಲುಪಿದ 3 ದಿನಗಳ ಒಳಗೆ ಸ್ಪೀಕರ್‌ಗೆ ಉತ್ತರ ಸಲ್ಲಿಸಬೇಕು ಹಾಗೂ ಮಂಗಳವಾರ ಬೆಳಗ್ಗೆ 11 ಗಂಟೆಗೆ ವಿಚಾರಣೆಗೆ ಹಾಜರಾಗಬೇಕೆಂದು ಜುಲೈ 18 ರಂದು ಸೂಚಿಸಲಾಗಿದೆ.